ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 24/7/2020

# 5 ಲಕ್ಷ ಕೋಟಿ ಹೂಡಿಕೆ

## ನೂತನ ಕೈಗಾರಿಕೆ ನೀತಿ-2020-25ಕ್ಕೆ ರಾಜ್ಯ ಸಚಿವ ಸಂಪುಟ ಅಂಗೀಕಾರ

## 20 ಲಕ್ಷ ಉದ್ಯೋಗ ಸೃಷ್ಟಿ ಗುರಿ | ಕನ್ನಡಿಗರಿಗೆ ಮೀಸಲಾತಿ ಕಲ್ಪಿಸಲು ನಿರ್ಧಾರ

**ಬೆಂಗಳೂರು:** ಬಹುನಿರೀಕ್ಷಿತ ನೂತನ ಕೈಗಾರಿಕೆ ನೀತಿ 2020-25ಕ್ಕೆ ರಾಜ್ಯ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ನೂತನ ಕೈಗಾರಿಕೆ ನೀತಿಯಲ್ಲಿ ಮುಂದಿನ ಐದು ವರ್ಷಗಳಲ್ಲಿ ಐದು ಲಕ್ಷ ಕೋಟಿ ರೂ. ಬಂಡವಾಳ ಹೂಡಿಕೆ ಹಾಗೂ 20 ಲಕ್ಷ ಉದ್ಯೋಗ ಸೃಷ್ಟಿಯ ಗುರಿ ಹೊಂದಲಾಗಿದೆ. ರಾಜ್ಯದಲ್ಲಿ ಕೈಗಾರಿಕಾ ಸ್ನೇಹಿ ವಾತಾವರಣ ನಿರ್ಮಾಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ನೂತನ ಒತ್ತು ನೀಡಲಾಗಿದೆ.

ಖಾಸಗಿಯವರಿಂದ ಕೈಗಾರಿಕಾ ಪಾರ್ಕ್, ಸೆಕ್ಟರ್ ಸ್ಪೆಸಿಫಿಕ್ ಪಾರ್ಕ್, ಲಾಜಿಸ್ಟಿಕ್ಸ್ ಪಾರ್ಕ್ ಹಾಗೂ ಫ್ಲಾಟೆಡ್ ಫ್ಯಾಕ್ಟರಿಗಳ ಸ್ಥಾಪನೆಗೆ ಉತ್ತೇಜನ ನೀಡುವುದು. ಚೆನ್ನೈ-ಬೆಂಗಳೂರು ಕೈಗಾರಿಕಾ ಕಾರಿಡಾರ್ ಮತ್ತು ಬೆಂಗಳೂರು -ಮುಂಬೈ ಆರ್ಥಿಕ ಕಾರಿಡಾರ್‌ಗಳ ಅಭಿವೃದ್ಧಿ ಹಾಗೂ ಏಕ ಗವಾಕ್ಷಿ ಮೂಲಕ ಉದ್ಯಮ ಸ್ಥಾಪನೆ ಮುಂದಾಗುವವರಿಗೆ ಅಗತ್ಯ ಅನುಮತಿಗಳನ್ನು ನೀಡುವುದು ಸೇರಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೈಗಾರಿಕೆ ಸಚಿವ ಜಗದೀಶ್ ಶೆಟ್ಟರ್, ಬಹಳ ಮುಖ್ಯವಾಗಿ ಉದ್ದಿಮೆದಾರರು, ಬಂಡವಾಳ ಹೂಡಿಕೆದಾರರು ಕಾತುರದಿಂದ ಕಾಯುತ್ತಿದ್ದ ಹೊಸ ಕೈಗಾರಿಕಾ ನೀತಿ 2020-25 ಸಂಪುಟದಲ್ಲಿ ಚರ್ಚೆಯಾಗಿ ಅಂಗೀಕಾರ ನೀಡಲಾಗಿದೆ. ರಫ್ತಿನಲ್ಲಿ ದೇಶದಲ್ಲಿ ಮೂರನೇ ಸ್ಥಾನ ಪಡೆಯುವುದು, ವಾರ್ಷಿಕ ಕೈಗಾರಿಕಾ ಅಭಿವೃದ್ಧಿ ಶೇ.10 ರಷ್ಟು ಹೆಚ್ಚಳ ನಮ್ಮ ಗುರಿಯಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಬೃಹತ್ ಕೈಗಾರಿಕಾ ಪ್ರದೇಶಗಳಿಗೆ ಸಂಬಂಧಿಸಿದ ಕಾಯ್ದೆಗಳಡಿ ಕೈಗಾರಿಕಾ ಟೌನ್‌ಶಿಪ್‌ಗಳೆಂದು ಘೋಷಿಸಲಾಗುವುದು ಎಂದು ತಿಳಿಸಿದರು.

ಕರ್ನಾಟಕ ಕೈಗಾರಿಕಾ ಶಕ್ತಿ ಬಳಸಿಕೊಂಡು ಕೈಗಾರೀಕರಣಕ್ಕಾಗಿ ಪರಿಸರ ಶಕ್ತಗೊಳಿಸಿ ಮೂಲಸೌಕರ್ಯ ಅಭಿವೃದ್ಧಿ ಕೈಗಾರಿಕೆ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳಲ್ಲಿ ಹಾಗೂ ಎರಡು ಮತ್ತು ಮೂರನೇ ಹಂತದ ನಗರಗಳಲ್ಲಿ ಸಮಾನ ಅವಕಾಶ ಒದಗಿಸಿ ಬಂಡವಾಳ ಹೂಡಿಕೆಯ ಅಭಿವೃದ್ಧಿಯನ್ನು ರಾಜ್ಯದಲ್ಲಿ ಖಾತರಿಪಡಿಸಲಾಗುವುದು ಎಂದು ತಿಳಿಸಿದರು.



### ಮೂರು ವಲಯಗಳು


**ನೂತನ ಕೈಗಾರಿಕೆ ನೀತಿಯಲ್ಲಿ ಬಂಡವಾಳ ಹೂಡಿಕೆಗೆ ರಿಯಾಯಿತಿ ಒದಗಿಸಲು ರಾಜ್ಯದ ಜಿಲ್ಲೆಗಳನ್ನು ಮೂರು ವಲಯಗಳಾಗಿ ವಿಂಗಡಿಸಲಾಗಿದೆ. ವಲಯ-1 ಹಾಗೂ ವಲಯ-2 ರಡಿ ಕೈಗಾರಿಕಾ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಸೇರಿರುತ್ತವೆ. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳನ್ನು ವಲಯ-3 ರಲ್ಲಿ ವರ್ಗೀಕರಿಸಲಾಗಿದೆ.**

### ಕನ್ನಡಿಗರಿಗೆ ಮೀಸಲಾತಿ

**ಕೈಗಾರಿಕೆಗಳಲ್ಲಿನ ಗ್ರೂಪ್ ಡಿ ಹುದ್ದೆಗಳಲ್ಲಿ ಶೇ.100 ಹಾಗೂ ಇತರೆ ಹುದ್ದೆಗಳಲ್ಲಿ ಶೇ.70 ಕನ್ನಡಿಗರಿಗೆ ಉದ್ಯೋಗ ಮೀಸಲಾತಿಗೆ ಕೈಗಾರಿಕೆ ನೀತಿಯಲ್ಲಿ ಪ್ರಸ್ತಾಪಿಸಲಾಗಿದೆ.**

### ಶ್ರೇಷ್ಠತಾ ಕೇಂದ್ರ ಸ್ಥಾಪನೆ

ಎಂಎಸ್‌ಎಂಇ (ಸೂಕ್ಷ್ಮ ಸಣ್ಣ ಹಾಗೂ ಮಧ್ಯಮ)ಗಳಿಗೆ ಶ್ರೇಷ್ಠತಾ ಕೇಂದ್ರ ಸ್ಥಾಪಿಸಲು ಸರ್ಕಾರ ನಿರ್ಧರಿಸಿದ್ದು ಕಚ್ಚಾ ವಸ್ತು ಪೂರೈಕೆದಾರರು, ಮಾರುಕಟ್ಟೆ ಪ್ರವೇಶಾವಕಾಶ, ಗುಣಮಟ್ಟದ ನಿಯಂತ್ರಣ ಮತ್ತು ಪ್ರಮಾಣೀಕರಣಕ್ಕಾಗಿ ಆನ್‌ಲೈನ್ ತಂತ್ರಜ್ಞಾನ ವೇದಿಕೆಯನ್ನು ವಿನ್ಯಾಸಗೊಳಿಸುವುದು ಮತ್ತು ಸಾಲದ ಬಳಕೆಯನ್ನು ಹೆಚ್ಚಿಸುವುದು ಇದರ ಗುರಿ. ಕೆಐಎಡಿಬಿಯು ತನ್ನ ಕೈಗಾರಿಕಾ ಪ್ರದೇಶಗಳಲ್ಲಿ ಎಂಎಸ್‌ಎಂಇಗಳಿಗಾಗಿ ಕನಿಷ್ಠ ಶೇ.30 ಜಮೀನನ್ನು ಮೀಸಲಿಡುವುದು ಹಾಗೂ ತಂತ್ರಜ್ಞಾನ ಉನ್ನತೀಕರಣ ಮತ್ತು ತಾಂತ್ರಿಕ ಬೆಂಬಲ ನೀಡುವುದು, ಉತ್ತೇಜನಗಳು ಮತ್ತು ರಿಯಾಯಿತಿಗಳನ್ನು ನೀಡಲಾಗುವುದು ಎಂದು ಹೇಳಿದರು. ಬೃಹತ್ ಮತ್ತು ಮೆಗಾ ಯೋಜನೆಗಳ ಅಭಿವೃದ್ಧಿ ನಿಟ್ಟಿನಲ್ಲಿ ಕರ್ನಾಟಕವನ್ನು ಜಾಗತಿಕ ಮೌಲ್ಯ ಸರಪಳಿಯೊಂದಿಗೆ ಸಂಯೋಜಿಸುವುದು. ಬಂಡವಾಳ ಹೂಡಿಕೆಗಾಗಿ ವಾರ್ಷಿಕ ಕ್ರಿಯಾ ಯೋಜನೆ. ಕೆಐಎಡಿಬಿಯು ತನ್ನ ಕೈಗಾರಿಕಾ ಪ್ರದೇಶಗಳಲ್ಲಿ ಶೇ.70 ಹಂಚಿಕೆಯ ಜಮೀನನ್ನು ಮೀಸಲಿಡುವುದು.



### ಆದ್ಯತಾ ವಲಯಗಳು

ಕೈಗಾರಿಕಾ ನೀತಿಯಲ್ಲಿ ಆಟೋ ಮೊಬೈಲ್ಸ್ ಮತ್ತು ಆಟೋ ಕಾಂಪೋನೆಂಟ್ಸ್ ಫಾರ್ಮಾಸ್ಯುಟಿಕಲ್ ಮತ್ತು ಮೆಡಿಕಲ್ ಡಿವೈಸಸ್, ಎಂಜಿನಿಯರಿಂಗ್ ಮತ್ತು ಮೆಷಿನ್ ಟೂಲ್ಸ್ ನಾಲೆಡ್ಜ್ ಬೇಸ್ಡ್ ಇಂಡಸ್ಟ್ರೀಸ್, ಲಾಜಿಸ್ಟಿಕ್ಸ್ ರಿನೀವೇಬಲ್ ಎನರ್ಜಿ, ಏರೋಸ್ಪೇಸ್ ಮತ್ತು ಡಿಫೆನ್ಸ್ ಮತ್ತು ಎಲೆಕ್ಟ್ರಿಕ್ ವಾಹನಗಳ ಉತ್ಪಾದನಾ ಕ್ಷೇತ್ರಗಳನ್ನು ಆದ್ಯತಾ ವಲಯಗಳನ್ನಾಗಿ ಪರಿಗಣಿಸಲಾಗಿದೆ ಎಂದು ಜಗದೀಶ್ ಶೆಟ್ಟರ್ ತಿಳಿಸಿದರು.